ಪದವಿ ಪೂರ್ವ ಕಿರಿಯ ಕಾಲೇಜಿಗೆ ಸ್ವಂತ/ಕಟ್ಟಡ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 38 : (45)

ಶ್ರೀ ಸುರೇಶ್ ಬಾಬು ಸಿ.ಬಿ. (ಚಿಕ್ಕನಾಯಕನಹಳ್ಳಿ)

ಅ) ತುಮಕೂರು ಜಿಲ್ಲೆ, ಚಿಕ್ಕನಾಯಕನಹಳ್ಳಿ ತಾಲ್ಲೂಕು ಹುಳಿಯಾರು ಹೋಬಳಿ ಕೇಂದ್ರದಲ್ಲಿ ಇರುವ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿಗೆ ಸ್ವಂತ ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸ್ವಂತ ಕಟ್ಟಡ ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

ಇ) ಈ ಕಾಲೇಜಿನಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು; ವಿದ್ಯಾರ್ಥಿನಿಯರ ಸಂಖ್ಯೆಗನುಗುಣವಾಗಿ ಎಷ್ಟು ಕೊಠಡಿಗಳ ಅವಶ್ಯಕತೆ ಇದೆ;

ಈ) ಇನ್ನೆಷ್ಟು ಅವಧಿಯಲ್ಲಿ ಸ್ವಂತ ಕಟ್ಟಡ ನಿರ್ಮಿಸಲಾಗುವುದು?

ಶ್ರೀ ವಿಶ್ವೇಶ್ವರಯ್ಯ ಹೆಗಡೆ ಕಾಗೇರಿ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ)ಬಂದಿದೆ.

ಆ) ನಬಾರ್ಡ್ ಸಹಯೋಗದ ಆರ್‌ಐಡಿಎಫ್–13ನೇ ಯೋಜನೆಯಡಿ 02 ಕೊಠಡಿಗಳನ್ನು ನಿರ್ಮಿಸಲಾಗಿದೆ. ಅನುದಾನದ ಲಭ್ಯತೆಯನ್ನಾದರಿಸಿ ಮುಂದಿನ ಯೋಜನೆಗಳಲ್ಲಿ ಇನ್ನೂ ಹೆಚ್ಚಿನ ಕೊಠಡಿಗಳನ್ನು ಮತ್ತು ಪ್ರಯೋಗಾಲಯಗಳನ್ನು ನಿರ್ಮಿಸಲು ಕ್ರಮಕೈಗೊಳ್ಳಲಾಗುವುದು. ಅಲ್ಲದೆ ಹಾಲಿ ನಬಾರ್ಡ್ ಸಹಯೋಗದ ಆರ್‌ಐಡಿಎಫ್–13ರ ಯೋಜನೆಯಡಿಯ 2 ಕೊಠಡಿಗಳನ್ನು ಹಾಗೂ ಸ್ಥಳೀಯ ಪ್ರಾಥಮಿಕ ಶಾಲಾ ಕೊಠಡಿಗಳನ್ನು ಉಪಯೋಗಿಸಿಕೊಂಡು ಕಾಲೇಜನ್ನು ನಡೆಸಲಾಗುತ್ತಿದೆ.

ಇ) ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು, ಹುಳಿಯಾರು, ಚಿಕ್ಕನಾಯಕನಹಳ್ಳಿ ತಾಲ್ಲೂಕು, ತುಮಕೂರು ಜಿಲ್ಲೆ ಈ ಕಾಲೇಜಿನಲ್ಲಿ ಪ್ರಥಮ ಪಿಯುಸಿಯಲ್ಲಿ 181 ದ್ವಿತೀಯ ಪಿಯುಸಿಯಲ್ಲಿ 165 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುತ್ತಾರೆ. ವಿದ್ಯಾರ್ಥಿಗಳ ಸಂಖ್ಯೆಯನ್ನಾಧರಿಸಿ 06 ತರಗತಿ ಕೊಠಡಿಗಳು ಹಾಗೂ 03 ಪ್ರಯೋಗಾಲಯಗಳ ಅವಶ್ಯಕತೆಯಿರುತ್ತದೆ.

ಈ) ಅನುದಾನದ ಲಭ್ಯತೆಯನ್ನಾದರಿಸಿ ಮುಂದಿನ ಯೋಜನೆಗಳಲ್ಲಿ ಇನ್ನೂ ಹೆಚ್ಚಿನ ಕೊಠಡಿಗಳನ್ನು ಮತ್ತು ಪ್ರಯೋಗಾಲಯಗಳನ್ನು ನಿರ್ಮಿಸಲು ಕ್ರಮಕೈಗೊಳ್ಳಲಾಗುವುದು.

ಸರ್ಕಾರಿ ಪದವಿ ಪೂರ್ವ ಕಾಲೇಜು ಮಂಜೂರಾತಿ
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 32 : (10)

ಶ್ರೀ ರುದ್ರೇಶಗೌಡ ವೈ.ಎನ್. (ಬೇಲೂರು)

ಅ) ಬೇಲೂರು ತಾಲ್ಲೂಕಿನ ಗೆಂಡೇಹಳ್ಳಿ ಗ್ರಾಮದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು ಮಂಜೂರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಮಂಜೂರಾಗಿದ್ದಲ್ಲಿ, ಸ್ವಂತ ಕಟ್ಟಡದಲ್ಲಿ ತರಗತಿಗಳು ನಡೆಯುತ್ತಿವೆಯೇ;

ಇ) ಇಲ್ಲದಿದ್ದಲ್ಲಿ ಸ್ವಂತ ಕಟ್ಟಡ ಮಂಜೂರು ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ವಿಶ್ವೇಶ್ವರಯ್ಯ ಹೆಗಡೆ ಕಾಗೇರಿ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಬಂದಿದೆ.

ಆ) ಇಲ್ಲ.